# ಅಧಿವೇಶನಕ್ಕೆ ಸೋಂಕಿನ ಕರಿನೆರಳು
# ಶಾಸಕರಿಗೆ ಸಾಮೂಹಿಕ ತಪಾಸಣೆ

30/8/20

ಸಂ.ಕ.ಸಮಾಚಾರ, ಬೆಂಗಳೂರು

ಇದೇ ಸೆಪ್ಟೆಂಬರ್ 21ರಿಂದ 10 ದಿನಗಳ ಕಾಲ ನಡೆಯಲಿರುವ ವಿಧಾನಮಂಡಳದ ಮಳೆಗಾಲದ ಅಧಿವೇಶನದ ಮೇಲೆ ಕೋವಿಡ್ ಕರಾಳ ಛಾಯೆ ಎದುರಾಗಿದೆ. ಎಲ್ಲ ಮುಂಜಾಗ್ರತಾ ಕ್ರಮ ಕೈಗೊಂಡರೂ ಕೋವಿಡ್-19 ನಿಯಂತ್ರಣಕ್ಕೆ ಬಾರದ ಕಾರಣಕ್ಕೆ ಅಧಿವೇಶನದಲ್ಲಿ ಭಾಗವಹಿಸುವ ಎಲ್ಲಾ ಶಾಸಕರು-ಅಧಿಕಾರಿಗಳಿಗೂ ಕಡ್ಡಾಯ ಕೋವಿಡ್ ತಪಾಸಣೆಗೆ ನಿರ್ಧರಿಸಲಾಗಿದೆ.

ಕೊರೊನಾ ಕಾಟದ ನಡುವೆಯೂ ಅಧಿವೇಶನ ನಡೆಸಿ ಬಜೆಟ್‌ಗೆ ಅನುಮೋದನೆ ಪಡೆದುಕೊಳ್ಳಬೇಕಾದ ಅನಿವಾರ್ಯತೆ ಸರ್ಕಾರಕ್ಕಿದೆ. ಹೀಗಾಗಿ ಕೊರೊನಾ ಆತಂಕದ ಮಧ್ಯೆ ವಿಧಾನ ಮಂಡಳ ಅಧಿವೇಶನ ನಡೆಯಲೇಬೇಕಾಗಿದೆ, ಮುನ್ನೆಚ್ಚರಿಕೆ ಕ್ರಮವಾಗಿ ಶಾಸಕರಿಗೆ ಕಡ್ಡಾಯವಾಗಿ ಸಾಮೂಹಿಕ ಕೋವಿಡ್ ಪರೀಕ್ಷೆ ನಡೆಸಲಾಗುತ್ತಿದೆ. ತಪಾಸಣೆ ಬಳಿಕ ಯಾವುದೇ ಸೋಂಕಿಲ್ಲವೆಂದು ದೃಢಪಟ್ಟ ಬಳಿಕವೇ ಶಾಸಕರು ಕಲಾಪದಲ್ಲಿ ಭಾಗವಹಿಸಬೇಕಾಗುತ್ತದೆ.

ಅಧಿವೇಶನದ ಆರಂಭಕ್ಕೂ ಮೊದಲು ಶಾಸಕರು ಹಾಗೂ ವಿಧಾನ ಪರಿಷತ್ ಸದಸ್ಯರಿಗೆ ಸಾಮೂಹಿಕವಾಗಿ ಕೊರೊನಾ ವೈರಸ್ ಪರೀಕ್ಷೆಗೆ ಒಳಪಡಿಸಲು ವಿಧಾನಸಭೆ ಸಚಿವಾಲಯ ಚಿಂತನೆ ನಡೆಸಿದೆ. ಶಾಸಕರು ಮತ್ತು ಕಲಾಪದಲ್ಲಿ ಭಾಗವಹಿಸುವ ಅಧಿಕಾರಿಗಳಿಗೆ ಕೋವಿಡ್ ತಪಾಸಣೆ ಬಗ್ಗೆ ಸದ್ಯದಲ್ಲೇ ಸ್ಪೀಕರ್ ವಿಶ್ವೇಶ್ವರ್ ಹೆಗಡೆ ಕಾಗೇರಿ ಅವರು ನಿರ್ಧಾರ ತಿಳಿಸಲಿದ್ದಾರೆ. ಈ ಬಗ್ಗೆ ಮುಂದಿನ ವಾರ ಆರೋಗ್ಯ ಇಲಾಖೆ ಅಧಿಕಾರಿಗಳ ಜೊತೆ ಸಭಾಧ್ಯಕ್ಷರು ಸಮಾಲೋಚನೆ ನಡೆಸಲಿದ್ದಾರೆ.

ಈಗಾಗಲೇ ಸೆ.14ರಿಂದ ಸಂಸತ್ ಅಧಿವೇಶನ ಆರಂಭವಾಗುವ ಹಿನ್ನೆಲೆಯಲ್ಲಿ ಸ್ಪೀಕರ್ ಓಂಬಿರ್ಲಾ ಅವರು ಎಲ್ಲ ಸಂಸದರು ಕಡ್ಡಾಯವಾಗಿ ಕೊರೊನಾ ತಪಾಸಣೆ ಮಾಡಿಕೊಳ್ಳಬೇಕೆಂದು ಆದೇಶ ಹೊರಡಿಸಿದ್ದಾರೆ. ಇದೇ ಮಾದರಿ ಕರ್ನಾಟಕ ವಿಧಾನಸಭೆಯಲ್ಲೂ ಅನ್ವಯವಾಗಲಿದೆ. ವಿಶೇಷವೆಂದರೆ ಪಂಜಾಬ್‌ನಲ್ಲಿ ಸರ್ಕಾರ ಅಧಿವೇಶನದ ಆರಂಭಿಸಿದ ಬಳಿಕ 23 ಶಾಸಕರಲ್ಲಿ ಸೋಂಕು ಪತ್ತೆಯಾಗಿತ್ತು. ಹಾಗಾಗಿ ರಾಜ್ಯದಲ್ಲಿಯೂ ಎಲ್ಲ ರೀತಿಯ ಕೋವಿಡ್ ಮುಂಜಾಗ್ರತಾ ಕ್ರಮಗಳೊಂದಿಗೆ ಅಧಿವೇಶನ ನಡೆಸಲು ನಿರ್ಧಾರ ಮಾಡಲಾಗಿದೆ.

**ಕೊರೊನಾ ಹೆಮ್ಮಾರಿ**

## 42 ಶಾಸಕರಿಗೆ ನಂಜು

ರಾಜ್ಯ ವಿಧಾನಸಭೆ ಮತ್ತು ಪರಿಷತ್‌ನ ಒಟ್ಟು 42 ಸದಸ್ಯರು ಈಗಾಗಲೇ ಕೋವಿಡ್ ಸೋಂಕಿತರಾಗಿ ಚೇತರಿಸಿಕೊಂಡಿದ್ದಾರೆ. ಸಿಎಂ ಯಡಿಯೂರಪ್ಪ, ಪ್ರತಿಪಕ್ಷನಾಯಕ ಸಿದ್ದರಾಮಯ್ಯ, ಸಚಿವರಾದ ಆರ್.ಅಶೋಕ್, ಎಸ್.ಟಿ.ಸೋಮಶೇಖರ್, ಬಿ.ಸಿ.ಪಾಟೀಲ್, ಸಿ.ಟಿ.ರವಿ, ಶ್ರೀರಾಮುಲು, ಆನಂದ್‌ಸಿಂಗ್, ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್, ಶಾಸಕರಾದ ಜಮೀರ್‌ಅಹ್ಮದ್, ಎಸ್. ಅಂಗಾರ, ಲಿಂಗೇಶ್, ಹೆಚ್.ಡಿ ರೇವಣ್ಣ ಸಹಿತ 42 ಮಂದಿಗೆ ಕೋವಿಡ್ ಸೋಂಕು ತಗಲಿ ಚೇತರಿಸಿಕೊಂಡಿದ್ದಾರೆ.